ಅ) ಕಿತ್ತೂರು ಪಟ್ಟಣದಲ್ಲಿ ಉಪ ಖಜಾನೆ ಕಛೇರಿಯನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ :

ಆ) ಹಾಗಿದ್ದಲ್ಲಿ ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪಮುಖ್ಯಮಂತ್ರಿಗಳು) :

ಅ) ಇಲ್ಲ. ಈಗಾಗಲೇ ಕಿತ್ತೂರಿನಲ್ಲಿ ಉಪ ಖಜಾನೆಯು ದಿನಾಂಕ :29.5.1985 ರಿಂದ ಕಾರ್ಯನಿರ್ವಹಿಸುತ್ತಿದೆ.

ಆ) ಉದ್ಭವಿಸುವುದಿಲ್ಲ.

ಅನುಬಂಧ (ಆ)

396 (639) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ): ಮಾನ್ಯ ಕಂದಾಯ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಪ್ರಕೃತಿ ವಿಕೋಪದಿಂದ ರಾಜ್ಯದಲ್ಲಿ ಹಾನಿಗೊಳಗಾದ ಫಲಾನುಭವಿಗಳಿಗೆ ಅವೈಜ್ಞಾನಿಕವಾಗಿ ಅಂದಾಜು ಪಟ್ಟಿಯನ್ನು ನೀಡಿರುವುದು ಹಾಗು ಪರಿಹಾರ ನೀಡುವಲ್ಲಿ ತುಂಬಾ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

2) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮವೇನು ;

3) ಫಲಾನುಭವಿಗಳಿಗೆ ಹೆಚ್ಚಿನ ಪರಿಹಾರವನ್ನು ನೀಡಲುನಿರ್ಧರಿಸಲಾಗಿದೆಯೇ: ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು) :

1) ಇಲ್ಲ.

2) ಉದ್ಭವಿಸುವುದಿಲ್ಲ.

3) ಹೌದು, ಕೇಂದ್ರ ಸರ್ಕಾರದ ಪ್ರಕೃತಿ ವಿಕೋಪ ಮಾರ್ಗಸೂಚಿಗಳನ್ವಯ ಪರಿಹಾರ ನೀಡಲಾಗುತ್ತಿದೆ. ಕೇಂದ್ರ ಸರ್ಕಾರವು ನೀಡುತ್ತಿರುವ ಬೆಳೆ ಪರಿಹಾರ ಕಡಿಮೆ ಇರುವುದನ್ನು ಗಮನಿಸಿ ರಾಜ್ಯ ಸರ್ಕಾರವು ಆದೇಶ ಸಂಖ್ಯೆ :ಆರ್‌ಡಿ 176 ಟಿಎನ್‌ಆರ್ 06, ದಿನಾಂಕ:12.6.06ರಲ್ಲಿ ಪ್ರಕೃತಿ ವಿಕೋಪದಿಂದ ಹಾನಿಗೀಡಾದ ರೈತರ ಬೆಳೆಗಳಿಗೆ ನೀಡುತ್ತಿರುವ ಪರಿಹಾರಧನವನ್ನು ದ್ವಿಗುಣಗೊಳಿಸಿ ಆದೇಶ ಹೊರಡಿಸಿದೆ.

397 (640) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ): ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಳ್ಳಾರಿ ಜಿಲ್ಲೆಯಲ್ಲಿ 1980ರ ಅರಣ್ಯ ಕಾಯ್ದೆಯಡಿ ಎಷ್ಟು ಅರಣ್ಯ ಪ್ರದೇಶವನ್ನು ಅರಣ್ಯ ಗಣಿ ಕೈಗಾರಿಕೆಗಾಗಿ ಮಂಜೂರು ಮಾಡಲಾಗಿದೆ :

ಅ) ಈ ಗಣಿಗಾರಿಕೆಯಿಂದ ಸರ್ಕಾರಕ್ಕೆ ಈವರೆಗೆ ಸಂದಾಯವಾಗಿರುವ ಆದಾಯದ ಮೊತ್ತವೆಷ್ಟು ಹಾಗೂ ಪ್ರತಿ ಮೆಟ್ರಿಕ್ ಟನ್ ಕಬ್ಬಿಣದ ಅದಿರಿಗೆ ನಿಗದಿಪಡಿಸಿರುವ ಬೆಲೆ ಎಷ್ಟು :

ಇ) ಬಳ್ಳಾರಿ ಜಿಲ್ಲೆಯ ಅರಣ್ಯ ಪ್ರದೇಶದಲ್ಲಿ ಅಕ್ರಮವಾಗಿ ಕಬ್ಬಿಣದ ಅದಿರನ್ನು ತೆಗೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

ಈ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮವೇನು?

ಶ್ರೀ ಸಿ. ಚೆನ್ನಿಗಪ್ಪ (ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು) :

ಅ) ಬಳ್ಳಾರಿ ಜಿಲ್ಲೆಯ ಅರಣ್ಯ ಪ್ರದೇಶದಲ್ಲಿ ಒಟ್ಟು 52 ಗಣಿ ಗುತ್ತಿಗೆಗಳನ್ನು 1980ರ ಅರಣ್ಯ (ಸಂರಕ್ಷಣಾ) ಕಾಯ್ದೆ ಅಡಿಯಲ್ಲಿ ಮಂಜೂರು ಮಾಡಲಾಗಿರುತ್ತದೆ. ಅವುಗಳ ಒಟ್ಟು ಅರಣ್ಯ ಪ್ರದೇಶದ ವಿಸ್ತೀರ್ಣ 3843. 68 ಹೆ. ಆಗಿರುತ್ತದೆ.

ಆ) 1) ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಪಡೆದ ಮಾಹಿತಿಯ ಪ್ರಕಾರ ಕಬ್ಬಿಣ ಅದಿರಿನ ಗಣಿಗಾರಿಕೆಯಿಂದ ಬಂದಿರುವ ರಾಯಲ್ಟಿ ವಿವರಗಳನ್ನು ಈ ಕೆಳಗೆ ನೀಡಲಾಗಿದೆ. ಈ ವಿವರಗಳು ಅರಣ್ಯ ಪ್ರದೇಶದಲ್ಲಿರುವ ಗಣಿಗಳಿಂದ ಮತ್ತು ಇತರೆ ಸರ್ಕಾರಿ ಭೂಮಿಯಲ್ಲಿರುವ ಗಣಿಗಳಿಂದ ಬಂದಿರುವ ಆಧಾರವನ್ನು ಒಳಗೊಂಡಿರುತ್ತದೆ.

2003–04	2004–05	2005–06	ಒಟ್ಟು
471280858/–	683974138/–	833219108/–	1988474104/–

2) ಈ ಗಣಿ ಕೈಗಾರಿಕೆಯಿಂದ ಅರಣ್ಯ ಇಲಾಖೆಗೆ ಕಳೆದ ಮೂರು ವರ್ಷಗಳಿಂದ ಅರಣ್ಯ ರಹದಾರಿ ಪತ್ರಗಳ ಶುಲ್ಕ ಹಾಗೂ ಅರಣ್ಯ ಪ್ರದೇಶದ ಬಾಡಿಗೆ ಹಣ ಮುಖಾಂತರ ಈ ಕೆಳಗಿನಂತೆ ಆದಾಯವನ್ನು ಸಂಗ್ರಹಿಸಲಾಗಿದೆ.

2003–04	2004–05	2005–06	ಒಟ್ಟು
5,20,47,065/–	11,85,40,743/–	9.83.59.930/–	26,89,47,738/–

ಇ) ಈ) ಯಾರು ಯಾರು ಅಕ್ರಮ ಗಣಿಗಾರಿಕೆ ಮಾಡುತ್ತಿದ್ದಾರೆ ಎಂಬುದನ್ನು ಪ್ರತಿ ಕಂಪನಿಗೆ ನೀಡಲಾದ ಅರಣ್ಯ ಪ್ರದೇಶದ ಸರ್ವೆ ಮಾಡಿದ ನಂತರ ನಿಖರವಾಗಿ ಹೇಳಬಹುದಾಗಿದೆ. ದಿನಾಂಕ :16.11.2005 ರಲ್ಲಿ ಸರ್ಕಾರಿ ಆದೇಶವನ್ನು ಹೊರಡಿಸಿ ರಾಜ್ಯ ಮಟ್ಟದಲ್ಲಿ ಮತ್ತು ಜಿಲ್ಲಾ ಮಟ್ಟದಲ್ಲಿ ಟಾಸ್ಕ್ ಫೋರ್ಸ್ ಪಡೆಯನ್ನು ನಿರ್ಮಿಸಿದ್ದು, ಅದರಂತೆ ಅಕ್ರಮ ಗಣಿಗಾರಿಕೆಯನ್ನು ತಡೆಯಲು ಎಲ್ಲಾ ರೀತಿಯ ಕಟ್ಟುನಿಟ್ಟಿನ ಕ್ರಮವನ್ನು ತೆಗೆದುಕೊಳ್ಳಲಾಗಿದೆ.

398 (641) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ): ಮಾನ್ಯ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?